ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

115 (123) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಿಸೆಂಬರ್-2019 ರಿಂದ ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವುದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಆ) ಕೊಬ್ಬರಿ ಧಾರಣೆಯು ಇಳಿಮುಖವಾಗುತ್ತಿರುವುದರಿಂದ ತೆಂಗು ಬೆಳೆಗಾರರಿಗೆ ಆಗುತ್ತಿರುವ ನಷ್ಟವನ್ನು ಸರಿದೂಗಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ತೆಂಗು ಬೆಳೆಗಾರರಿಗೆ ಸರ್ಕಾರವು ಪರಿಹಾರ ಘೋಷಿಸಿದೆಯೇ ; ಘೋಷಿಸಿದ್ದಲ್ಲಿ, ಕ್ವಿಂಟಾಲ್‌ಗೆ ಎಷ್ಟು ಪರಿಹಾರ ಘೋಷಿಸಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ತೆಂಗು ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಅಥವಾ ಬೆಂಬಲ ಬೆಲೆ ಘೋಷಿಸಲು ಮತ್ತು ನಾಫೆಡ್ ಮೂಲಕ ಕೊಬ್ಬರಿ ಖರೀದಿ ಕೇಂದ್ರಗಳನ್ನು ತೆರೆಯುವ ಬಗ್ಗೆ ಸರ್ಕಾರದ ನಿಲುವೇನು ?